**ದಿನಾಂಕಃ 01.09.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀಮತಿ ಎನ್ ಎಮ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ಆಲಗೂಡು ಗ್ರಾಮದ ಸರ್ವೆ ನಂಬರ್ 315/6 ರ 1980-81 ನೇ ಸಾಲಿನ ಪಹಣಿ ಪತ್ರಿಕೆಯ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಕಂದಾಯ ಪಾವತಿಸದ ರಶೀದಿಯನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಸರ್ವೆ ನಂಬರ್ 315/1, 2, 3, 4 ಮತ್ತು 6 ರ ಹಿಸ್ಸಾ ಟಿಪ್ಪಣಿ ಬುಕ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ಸರ್ವೆ ನಂಬರ್ 315/5 ಮತ್ತು 7 ರ ಹಿಸ್ಸಾ ಟಿಪ್ಪಣಿ ಬುಕ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ದಿನಾಂಕ 16.02.2023 ರ ಸ್ವೀಕೃತಿಯನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-5 ಎಂದು, ಐದು ಭಾವ ಚಿತ್ರಗಳನ್ನು ಹಾಜರು ಪಡಿಸುತ್ತಿದ್ದು ಅವುಗಳನ್ನು ನಿಪಿ-6 ರಿಂದ 10 ಎಂದು, ಸಿ.ಡಿ ಯನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ